ಅನುಬಂಧ-1

ಕ್ರ.ಸಂ.	ಕಾರ್ಯಕ್ರಮಗಳು
1.	ಕಾನೂನು ಪದವೀಧರರಿಗೆ ಶಿಷ್ಯವೇತನ
2.	ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳು
3.	ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ
4.	ಐ.ಟಿ.ಐ. ಡಿಪ್ಲೋಮೋ ವಿದ್ಯಾರ್ಥಿಗಳಿಗೆ ಶಿಷ್ಯವೇತನ
5.	ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಭೋಜನ ವೆಚ್ಚದ ಅನುದಾನ
6.	ಅಲ್ಪಸಂಖ್ಯಾತರ ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ
7.	ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು
8.	ಅಲ್ಪಸಂಖ್ಯಾತರಿಗಾಗಿ ಸಮುದಾಯ ಭವನ: ಶಾದಿ ಮಹಲ್ಗಳ ನಿರ್ಮಾಣ
9.	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳು
10.	ಅಲ್ಪಸಂಖ್ಯಾತರಿಗಾಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು
11.	ಅಲ್ಪಸಂಖ್ಯಾತರ ಹಾಸ್ಟೆಲ್ ಕಟ್ಟಡ ನಿರ್ಮಾಣ
12.	ವೃತ್ತಿಪರ ತರಬೇತಿ
13.	ಸ್ವಾವಲಂಬನ ಸಾಲ, ಸಹಾಯಧನ, ವೃತ್ತಿ ತರಬೇತಿ ಮತ್ತು ಗಂಗಾಕಲ್ಯಾಣ

ರಾಜ್ಯದಲ್ಲಿ ರೇಷ್ಮೆ ಘಟಕಗಳ ಪುನಶ್ಚೇತನ

3679(4135) ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ರೇಷ್ಮೆ ಘಟಕಗಳು ಎಷ್ಟು; (ವಿವರ ನೀಡುವುದು);

ಆ) ಇವುಗಳಲ್ಲಿ ಲಾಭದಲ್ಲಿರುವ ಘಟಕಗಳು ಯಾವುವು; ನಷ್ಟದಲ್ಲಿರುವ ಘಟಕಗಳು ಯಾವುವು;

ಇ) ರೇಷ್ಮೆ ಘಟಕಗಳು ನಷ್ಟ ಹೊಂದಲು ಕಾರಣಗಳೇನು;

ಈ) ನಷ್ಟದಲ್ಲಿರುವ ರೇಷ್ಮೆ ಘಟಕಗಳ ಪುನಶ್ಚೇತನಕ್ಕೆ ಕೈಗೊಂಡಿರುವ / ಕೈಗೊಳ್ಳಲಿರುವ ಕ್ರಮಗಳೇನು; (ವಿವರ ನೀಡುವುದು)?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಆರು ರೇಷ್ಮೆ ಘಟಕಗಳಿದ್ದು ಅವು ಈ ಕೆಳಗಿನಂತಿವೆ:-

1. ಸರ್ಕಾರಿ ರೇಷ್ಮೆ ಕಾರ್ಖಾನೆ, ಚಾಮರಾಜನಗರ
2. ಸರ್ಕಾರಿ ರೇಷ್ಮೆ ಕಾರ್ಖಾನೆ, ಸಂತೇಮರಹಳ್ಳಿ
3. ಸರ್ಕಾರಿ ರೇಷ್ಮೆ ಕಾರ್ಖಾನೆ ಕೊಳ್ಳೇಗಾಲ
4. ಸರ್ಕಾರಿ ರೇಷ್ಮೆ ಕಾರ್ಖಾನೆ, ಮಾಂಬಳ್ಳಿ
5. ಸರ್ಕಾರಿ ರೇಷ್ಮೆ ಹುರಿ ಮತ್ತು ನೇಯ್ಗೆ ಕಾರ್ಖಾನೆ, ಮುಡಿಗುಂಡಂ
6. ಸರ್ಕಾರಿ ರೇಷ್ಮೆ ಕಿರು ಘಟಕ, ತೋಳ ಹುಣಸೆ

ಆ) ಎಲ್ಲಾ ಘಟಕಗಳು ನಷ್ಟದಲ್ಲಿ ನಡೆಯುತ್ತಿವೆ.

ಇ) ಅವುಗಳ ಮೇಲುಸ್ತುವಾರಿ ವೆಚ್ಚ ಹೆಚ್ಚಾಗಿರುವ ಕಾರಣದಿಂದಾಗಿ ನಷ್ಟದಲ್ಲಿವೆ.

ಈ) ಈ ಕಾರ್ಖಾನೆಗಳ ಕಾರ್ಯದಕ್ಷತೆಯನ್ನು ಸುಧಾರಿಸಲು ಸರ್ಕಾರವು ದಿನಾಂಕ: 20–5–2003 ರಂದು ಆದೇಶ ಹೊರಡಿಸಿ 5 ಸರ್ಕಾರಿ ರೇಷ್ಮೆ ಘಟಕಗಳನ್ನು ಎರಡು ಘಟಕಗಳನ್ನಾಗಿ ಪುನರ್ ಸಂಘಟಿಸಿ ಸಿಬ್ಬಂದಿ / ಕಾರ್ಮಿಕರನ್ನು ಈ ಎರಡು ಘಟಕಗಳಲ್ಲಿ ಮರು ಹಂಚಿಕೆ ಮಾಡಲು ಆದೇಶಿಸಿದೆ.

ರಾಜ್ಯದಲ್ಲಿ ಪರಿಶಿಷ್ಟ ಜಾತಿ/ವರ್ಗಗಳವರಿಗೆ ನೀಡುತ್ತಿರುವ ಸೌಲಭ್ಯಗಳು

3680(4136) ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ(ಚಾಮರಾಜ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗಗಳವರಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು; (ವಿವರ ಒದಗಿಸುವುದು);

ಆ) ಈ ಸೌಲಭ್ಯಗಳನ್ನು ಇನ್ನೂ ಹೆಚ್ಚಿನ ರೀತಿಯಲ್ಲಿ ಒದಗಿಸಲು ಸರ್ಕಾರದ ನಿಲುವೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಅನುಷ್ಟಾನಿಸಲಾಗುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಕಲ್ಯಾಣ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ–1 ಮತ್ತು ಅನುಬಂಧ–2 ರಲ್ಲಿ ನೀಡಲಾಗಿದೆ.

ಆ) ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳಲ್ಲಿ ಲಭ್ಯವಿರುವ ಅನುದಾನಕ್ಕನುಗುಣವಾಗಿ ಇನ್ನಷ್ಟು ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಶಾಲಾ ಮತ್ತು ಕಾಲೇಜು ವಸತಿನಿಲಯಗಳಲ್ಲಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗಾಗಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಹೆಚ್ಚಿನ ಸೌಕರ್ಯಗಳನ್ನು ಕಲ್ಪಿಸಲು ಹಾಗೂ ಉತ್ತಮ ಫಲಿತಾಂಶಕ್ಕಾಗಿ ಲೈಬ್ರರಿ, ಕಲರ್ ಟೆಲಿವಿಷನ್, ಅಡುಗೆ ಅನಿಲ ಸೌಕರ್ಯ, ಪಾತ್ರೆಗಳು ಮತ್ತು ಸೋಲಾರ್ ವಾಟರ್ ಹೀಟರ್‌ಗಳನ್ನು ಒದಗಿಸಲಾಗಿದೆ.

ಅನುಬಂಧ–1

ಪರಿಶಿಷ್ಟ ಜಾತಿಯವರ ಕಲ್ಯಾಣಕ್ಕಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಕಾರ್ಯಕ್ರಮಗಳು

ರಾಜ್ಯ ಅನುದಾನದ ಕಾರ್ಯಕ್ರಮಗಳು

1. ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಉಚಿತ ವಸತಿನಿಲಯಗಳು
2. ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಿಕೆ.
3. ನವೋದಯ ಮತ್ತು ಮೊರಾರ್ಜಿದೇಸಾಯಿ ವಸತಿ ಶಾಲೆಗಳು – ನಿರ್ವಹಣೆ.
4. ಎಂ.ಫಿಲ್ ಮತ್ತು ಪಿ.ಹೆಚ್.ಡಿ. ಮುಂತಾದ ವಿದ್ಯಾರ್ಥಿಗಳಿಗೆ ಶಿಷ್ಯವೇತನ
5. ಸ್ನಾತಕೋತ್ತರ ತರಗತಿಯಲ್ಲಿ ರ್ಯಾಂಕ್ ಪಡೆಯುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ
6. ನವಚೇತನ ಕಾರ್ಯಕ್ರಮ – ವಿವಿಧ ಟ್ರೇಡ್ ಮತ್ತು ಮಾಹಿತಿ ತಂತ್ರಜ್ಞಾನದಲ್ಲಿ ಕುಶಲ ತರಬೇತಿ.
7. ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಮಾಡಲು ಸ್ವಯಂ ಸೇವಾ ಸಂಸ್ಥೆಗಳಿಗೆ ಧನ ಸಹಾಯ
8. ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಧನ ಸಹಾಯ